



ANANDA Bhaskar
PRGI No: TNMUL/25/A1387
www.anandabhaskar.com
ಸಂಪುಟ: 02 ಸಂಚಿಕೆ: 188 29.10.2026 FREE EPAPER




# ಅಂತಿಮ ಪಟ್ಟಿಯಲ್ಲಿ ೫೯.೦೮ ಲಕ್ಷ ಮತದಾರರು



**ಬೆಂಗಳೂರು, ಅ.28**

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಬಳಿಕ ಬೆಂಗಳೂರಿನ ಮತದಾರರ ಸಂಖ್ಯೆಯಲ್ಲಿ ಶೇ.43.13ರಷ್ಟು ಇಳಿಕೆಯಾಗಿದೆ. ಅಕ್ಟೋಬರ್ 27ರಂದು ಪ್ರಕಟವಾದ ಅಂತಿಮ ಮತದಾರರ ಪಟ್ಟಿಯಲ್ಲಿ 59.08 ಲಕ್ಷ ಮತದಾರರು ದಾಖಲಾಗಿದ್ದಾರೆ. ಪರಿಷ್ಕರಣೆಗೂ ಮುನ್ನ ನಗರದಲ್ಲಿ 1.03 ಕೋಟಿಗೂ ಅಧಿಕ ಮತದಾರರಿದ್ದರು ಎಂದು ಅಧಿಕೃತ ಅಂಕಿ–ಅಂಶಗಳು ತಿಳಿಸಿವೆ.ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಎಸ್‌ಐಆರ್‌ಗೂ ಮುನ್ನ 1,03,88,363 ಮತದಾರರಿದ್ದರು. ಅಂತಿಮ ಪಟ್ಟಿಯಲ್ಲಿ ಈ ಸಂಖ್ಯೆ 59,08,151ಕ್ಕೆ ಇಳಿದಿದೆ. ಒಟ್ಟು 44,80,212 ಮತದಾರರ ಹೆಸರುಗಳು ಪಟ್ಟಿಯಿಂದ ಕಡಿತಗೊಂಡಿವೆ. ಈ ಬದಲಾವಣೆಗೆ ಗೈರುಹಾಜರಿ, ಶಾಶ್ವತವಾಗಿ ಸ್ಥಳಾಂತರ, ಮರಣ, ನಕಲಿ ನೋಂದಣಿ ಸೇರಿದಂತೆ ವಿವಿಧ ಕಾರಣಗಳನ್ನು ಅಧಿಕಾರಿಗಳು ಉಲ್ಲೇಖಿಸಿದ್ದಾರೆ. ಅಂತಿಮ ಪಟ್ಟಿಯಲ್ಲಿರುವ 59,08,151 ಮತದಾರರಲ್ಲಿ 28,67,256 ಪುರುಷರು, 30,40,221 ಮಹಿಳೆಯರು ಹಾಗೂ 674 ಇತರ ವರ್ಗದ ಮತದಾರರಿದ್ದಾರೆ. ಗಸ್ಟ್ 24ರಂದು ಪ್ರಕಟಿಸಿದ್ದ ಕರಡು ಪಟ್ಟಿಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ 56,99,660 ಮತದಾರರಿದ್ದರು. ನಂತರದ ಪರಿಶೀಲನೆ ಮತ್ತು ಹಕ್ಕು–ಆಕ್ಷೇಪಣೆಗಳ ಪ್ರಕ್ರಿಯೆಯಲ್ಲಿ 2,74,372 ಹೊಸ ಮತದಾರರನ್ನು ಸೇರಿಸಲಾಗಿದೆ. 65,881 ಹೆಸರುಗಳನ್ನು ಅಳಿಸಲಾಗಿದ್ದು, 1,81,053 ಮತದಾರರ ಹೆಸರು ಅಥವಾ ಇತರ ವಿವರಗಳಲ್ಲಿ ತಿದ್ದುಪಡಿ ಮಾಡಲಾಗಿದೆ. ಹೀಗಾಗಿ ಕರಡು ಪಟ್ಟಿಗೆ ಹೋಲಿಸಿದರೆ ಅಂತಿಮ ಪಟ್ಟಿಯಲ್ಲಿ 2.08 ಲಕ್ಷ ಮತದಾರರ ನಿವ್ವಳ ಹೆಚ್ಚಳವಾಗಿದೆ. ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ಅವರು, ಅರ್ಹ ಮತದಾರರ ಹೆಸರುಗಳನ್ನು ಉದ್ದೇಶಪೂರ್ವಕವಾಗಿ ಅಳಿಸಲಾಗಿಲ್ಲ ಎಂದು ತಿಳಿಸಿದ್ದಾರೆ. ಫಾರಂ–7 ಅರ್ಜಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಲ್ಲಿಸಿದ ಮಾತ್ರಕ್ಕೆ ಹೆಸರುಗಳನ್ನು ತೆಗೆದುಹಾಕಿಲ್ಲ; ಅರ್ಜಿಗಳನ್ನು ಪರಿಶೀಲಿಸಿ ಕಾನೂನುಬದ್ಧವಾಗಿ ಕ್ರಮ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಆದಾಗ್ಯೂ, ಮತದಾರರು ತಮ್ಮ ಹೆಸರು ಅಂತಿಮ ಪಟ್ಟಿಯಲ್ಲಿದೆಯೋ ಎಂಬುದನ್ನು ಪರಿಶೀಲಿಸುವುದು ಮುಖ್ಯವಾಗಿದೆ. ಹೆಸರು ಕೈಬಿಟ್ಟಿದ್ದರೆ ಅಥವಾ ವಿವರಗಳಲ್ಲಿ ತಪ್ಪಿದ್ದರೆ, ಚುನಾವಣಾ ಅಧಿಕಾರಿಗಳನ್ನು ಸಂಪರ್ಕಿಸಿ ಅಗತ್ಯ ತಿದ್ದುಪಡಿ ಮಾಡಿಸಿಕೊಳ್ಳಬಹುದು.

# ಜನರು ನಮಗೆ ಸಂದೇಶ ನೀಡಿದ್ದಾರೆ, ತಪ್ಪುಗಳನ್ನು ಸರಿಪಡಿಸಿಕೊಳ್ಳುತ್ತೇವೆ: ಡಿ.ಕೆ. ಶಿವಕುಮಾರ್

**ಬೆಂಗಳೂರುವಿ ಅಕ್ಟೋಬರ್. 28 :**
ಕರ್ನಾಟಕ ವಿಧಾನ ಪರಿಷತ್ತಿನ ನಾಲ್ಕು ಕ್ಷೇತ್ರಗಳ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಎಲ್ಲಾ ಸ್ಥಾನಗಳನ್ನು ಗೆದ್ದ ಹಿನ್ನೆಲೆಯಲ್ಲಿ, ಜನರ ತೀರ್ಪನ್ನು ಗೌರವದಿಂದ ಸ್ವೀಕರಿಸುವುದಾಗಿ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಚುನಾವಣೆಯ ಫಲಿತಾಂಶವನ್ನು ಸಮಗ್ರವಾಗಿ ಪರಿಶೀಲಿಸಿ, ಎಲ್ಲಿ ತಪ್ಪಾಗಿದೆ ಎಂಬುದನ್ನು ಗುರುತಿಸಿ ಅಗತ್ಯ ತಿದ್ದುಪಡಿ ಕ್ರಮಗಳನ್ನು ಕೈಗೊಳ್ಳುವುದಾಗಿ ಅವರು ಹೇಳಿದ್ದಾರೆ.

ಬುಧವಾರ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ಕಾಂಗ್ರೆಸ್ ಪಕ್ಷ ಎರಡು ಸ್ಥಾನಗಳನ್ನು ಗೆಲ್ಲುವ ನಿರೀಕ್ಷೆ ಹೊಂದಿತ್ತು. ಆದರೆ ಫಲಿತಾಂಶ ನಿರೀಕ್ಷೆಗೆ ತಕ್ಕಂತೆ ಬಂದಿಲ್ಲ. ಮತದಾರರು ನೀಡಿರುವ ಸಂದೇಶವನ್ನು ಸೂಕ್ಷ್ಮವಾಗಿ ಪರಿಶೀಲಿಸಿ, ಪಕ್ಷದ ನ್ಯೂನತೆಗಳನ್ನು ಸರಿಪಡಿಸಿಕೊಳ್ಳಲಾಗುವುದು ಎಂದು ತಿಳಿಸಿದರು.

"ಪರಿಷತ್ ಚುನಾವಣೆಯಲ್ಲಿ ಮತದಾರರು ನೀಡಿರುವ ತೀರ್ಪನ್ನು ನಾವು ಗೌರವದಿಂದ ಸ್ವೀಕರಿಸುತ್ತೇವೆ. ನಮಗೆ ಒಂದು ಸ್ಥಾನ ಇತ್ತು. ಇನ್ನೊಂದು ಸ್ಥಾನವನ್ನೂ ಗೆಲ್ಲುವ ನಿರೀಕ್ಷೆ ಹೊಂದಿದ್ದೆವು. ಆದರೆ ಅದು ಸಾಧ್ಯವಾಗಲಿಲ್ಲ. ಜನರು ನಮಗೆ ಸಂದೇಶ ನೀಡಿದ್ದಾರೆ. ಅದನ್ನು



ಎಚ್ಚರಿಕೆಯಿಂದ ಪರಿಶೀಲಿಸಿ, ಎಲ್ಲಿ ತಪ್ಪಾಗಿದೆ ಎಂಬುದನ್ನು ತಿಳಿದುಕೊಂಡು ಸರಿಪಡಿಸಿಕೊಳ್ಳುತ್ತೇವೆ" ಎಂದು ಹೇಳಿದರು.

ನಾಲ್ಕೂ ಸ್ಥಾನಗಳಲ್ಲಿ ಎನ್‌ಡಿಎ ಗೆಲುವು

ವಿಧಾನ ಪರಿಷತ್ತಿನ ಎರಡು ಪದವೀಧರ ಕ್ಷೇತ್ರಗಳು ಮತ್ತು ಎರಡು ಶಿಕ್ಷಕರ ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟ ನಾಲ್ಕೂ ಸ್ಥಾನಗಳನ್ನು ಗೆದ್ದಿದೆ. ಬಿಜೆಪಿ ಮೂರು ಸ್ಥಾನಗಳಲ್ಲಿ ಜಯಗಳಿಸಿದರೆ, ಜೆಡಿಎಸ್ ಒಂದು ಸ್ಥಾನವನ್ನು ತನ್ನದಾಗಿಸಿಕೊಂಡಿದೆ. ಅಕ್ಟೋಬರ್ 23ರಂದು ಮತದಾನ ನಡೆದಿದ್ದು, ಫಲಿತಾಂಶ ಅಕ್ಟೋಬರ್ 27 ಮತ್ತು 28ರಂದು ಪ್ರಕಟವಾಯಿತು.


ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿ ಎ.ಪಿ. ರಂಗನಾಥ್ ಅವರು ಕಾಂಗ್ರೆಸ್‌ನ ಪುಟ್ಟಣ್ಣ ಅವರನ್ನು ಸೋಲಿಸಿದರು. ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಸೋಲನ್ನು ನಿರೀಕ್ಷಿಸಿರಲಿಲ್ಲ ಎಂದು ಶಿವಕುಮಾರ್ ಒಪ್ಪಿಕೊಂಡರು. ಆದರೂ ಪಕ್ಷದ ಅಭ್ಯರ್ಥಿಗಳು ಪಡೆದ ಮತಗಳ ಸಂಖ್ಯೆಯ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು.

ಉಪಚುನಾವಣೆ ಫಲಿತಾಂಶಗಳನ್ನೂ ಪರಿಗಣಿಸಿ

ಪರಿಷತ್ ಚುನಾವಣೆಯ ಫಲಿತಾಂಶವು 2028ರ ವಿಧಾನಸಭಾ ಚುನಾವಣೆಯ ದಿಕ್ಕನ್ನು ಸೂಚಿಸುತ್ತದೆ ಎಂದು ಬಿಜೆಪಿ ಮತ್ತು ಜೆಡಿಎಸ್ ನಾಯಕರು ಹೇಳುತ್ತಿರುವುದಕ್ಕೆ ಶಿವಕುಮಾರ್ ಪ್ರತಿಕ್ರಿಯಿಸಿದರು. ಚನ್ನಪಟ್ಟಣ ಮತ್ತು ಶಿಗ್ಗಾಂವಿ ವಿಧಾನಸಭಾ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಗೆದ್ದಿದ್ದನ್ನು ಉಲ್ಲೇಖಿಸಿದ ಅವರು, ಆ ಫಲಿತಾಂಶಗಳನ್ನೂ ಇದೇ ರೀತಿಯಲ್ಲಿ ಪರಿಗಣಿಸಬೇಕಲ್ಲವೇ ಎಂದು ಪ್ರಶ್ನಿಸಿದರು.

ಪರಿಷತ್ ಚುನಾವಣೆಯ ಸೋಲಿನಿಂದ ಪಾಠ ಕಲಿತು ಪಕ್ಷದ ಸಂಘಟನೆಯನ್ನು ಬಲಪಡಿಸುವುದಾಗಿ ತಿಳಿಸಿದ ಅವರು, ನವೆಂಬರ್ 1ರ ನಂತರ ಪಕ್ಷದ ಮುಂದಿನ ಕಾರ್ಯಯೋಜನೆಯನ್ನು ರೂಪಿಸಲಾಗುವುದು ಎಂದರು. ಕಾರ್ಯಕರ್ತರನ್ನು ಸಜ್ಜುಗೊಳಿಸಿ ಮುಂದಿನ ರಾಜಕೀಯ ಸವಾಲುಗಳನ್ನು ಎದುರಿಸಲು ಕ್ರಮ ಕೈಗೊಳ್ಳುವುದಾಗಿ ಹೇಳಿದರು.
ಮತಪತ್ರಗಳ ಬಳಕೆಯ ಕುರಿತು ಮಾತನಾಡಿದ ಶಿವಕುಮಾರ್, ಚುನಾವಣೆಯಲ್ಲಿ ಮತಪತ್ರಗಳ ಅಗತ್ಯವಿದೆ ಎಂಬ ತಮ್ಮ ನಿಲುವನ್ನು ಪುನರುಚ್ಚರಿಸಿದರು. ಚುನಾವಣಾ ಫಲಿತಾಂಶದ ಕುರಿತು ಪಕ್ಷದಲ್ಲಿ ಆತ್ಮಾವಲೋಕನ ನಡೆಸಿ ಮುಂದಿನ ಕ್ರಮಗಳನ್ನು ನಿರ್ಧರಿಸಲಾಗುವುದು ಎಂದು ತಿಳಿಸಿದರು.

# ಶಾಸಕರು ಸೇರಿ ೯ ಜನ ನಿರ್ದೋಷಿ ಕೋರ್ಟ್ ತೀರ್ಪು



**ಬಸವಕಲ್ಯಾಣ ಅ.28 :**
ಬಕ್ರೀದ್ ನಿಮಿತ್ತ ಕುರ್ಬಾನಿ ಕೊಡುತ್ತಿದ್ದ ವೇಳೆ ಗದ್ದಲ ಮಾಡಿದ ಸಂಬಂಧ ದಾಖಲಾಗಿದ್ದ ಪ್ರಕರಣದ ವಿಚಾರಣೆ ನಡೆಸಿದ ಬೆಂಗಳೂರಿನ 42ನೇ ಅಪರ ಮುಖ್ಯ ನ್ಯಾಯಿಕ ದಂಡಾಂಧಿಕಾರಿಗಳ (ಜನಪ್ರತಿನಿಧಿಗಳ) ನ್ಯಾಯಾಲಯ, ಶಾಸಕ ಶರಣು ಸಲಗರ ಸೇರಿದಂತೆ ಎಲ್ಲ 9 ಜನರನ್ನು ನಿರ್ದೋಷಿಗಳು ಎಂದು ಪ್ರಕಟಿಸಿ, ಬುಧವಾರ ತೀರ್ಪು ನೀಡಿದೆ.
ಇಲ್ಲಿನ ಹಿರೇಮಠ ಕಾಲನಿ ಮನೆಯೊಂದರಲ್ಲಿ ಬಕ್ರೀದ್ ನಿಮಿತ್ತ ಕುರ್ಬಾನಿ ಮಾಡಲಾಗುತ್ತಿದೆ ಎಂದು ದೂರಿ, 2023ರ ಜು.1ರಂದು ಶಾಸಕ ಸಲಗರ ಹಾಗೂ ಇತರರು ಸ್ಥಳಕ್ಕೆ ಭೇಟಿ ನೀಡಿದ್ದರು. ಪ್ರಾಣಿ ಬಲಿ ನೀಡುವುದು ಅಪರಾಧ. ತಪ್ಪಿತಸ್ಥರಿಗೆ ಶಿಕ್ಷೆ ನೀಡಬೇಕೆಂದು ಶಾಸಕರು ಒತ್ತಾಯಿಸಿದ್ದರು. ನಮ್ಮ ಧರ್ಮದ ಸಂಪ್ರದಾಯದಂತೆ ಕುರ್ಬಾನಿ ಕೊಡುವಾಗ, ಅವ್ಯಾಚ ಶಬ್ಧಗಳಿಂದ ಬೈದು, ಜೀವ ಬೆದರಿಕೆ ಹಾಕಿ, ಮತೀಯ ಭಾವನೆಗಳಿಗೆ ನೋವುಂಟು ಮಾಡಿದ್ದಾರೆ ಎಂದು ಶಾಸಕರು ಮತ್ತು ಇತರರ ವಿರುದ್ಧ ಇಲ್ಲಿನ ಟೌನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

# ಲಿಂಗಾಯತ ಧರ್ಮ ಮಾನ್ಯತೆಗೆ ಮರು ಪ್ರಸ್ತಾವನೆ ಸಲ್ಲಿಸಲು ಒತ್ತಾಯ.



**ಬಸವಕಲ್ಯಾಣ ಅ.28 :**
ಬಸವಾದಿ ಶರಣರ ತತ್ವಚಿಂತನೆಗಳು, ವಚನ ಸಾಹಿತ್ಯ ಹಾಗೂ ಸಮಾನತೆಯ ಸಂದೇಶವನ್ನು ಜನಮಾನಸಕ್ಕೆ ತಲುಪಿಸುವ ಉದ್ಧೇಶದಿಂದ ಬಸವಕಲ್ಯಾಣದ ಬಸವ ಮಹಾಮನೆ ಪರಿಸರದಲ್ಲಿ ಮೂರು ದಿನಗಳ ಕಾಲ ಆಯೋಜಿಸಲಾಗಿದ್ದ 25ನೇ ಕಲ್ಯಾಣ ಪರ್ವದ ರಜತ ಮಹೋತ್ಸವವು ಅದ್ಧೂರಿಯಾಗಿ ಸಮಾರೋಪಗೊಂಡಿತು. ಸಮಾರೋಪ ಸಮಾರಂಭದಲ್ಲಿ ಲಿಂಗಾಯತ ಧರ್ಮಕ್ಕೆ ಸ್ವತಂತ್ರ ಧರ್ಮದ ಮಾನ್ಯತೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಒಳಗೊಂಡ ಐದು ಮಹತ್ವದ ನಿರ್ಣಯಗಳನ್ನು ತೆಗೆದುಕೊಳ್ಳಲಾಯಿತು.
ಕೂಡಲಸಂಗಮದ ಬಸವಧರ್ಮ ಪೀಠಾಧ್ಯಕ್ಷೆ ಡಾ. ಮಾತೆ ಗಂಗಾದೇವಿ ಅವರ ಸಾನಿಧ್ಯದಲ್ಲಿ ಸ್ವಾಗತ ಸಮಿತಿ ಕೋಶಕಾರ್ಯದರ್ಶಿ ರಾಜೇಂದ್ರ ಜೊನ್ನಿಕೇರಿ ನಿರ್ಣಯಗಳನ್ನು ಮಂಡಿಸಿದರು. ನೆರೆದಿದ್ದ ಬಸವಾಭಿಮಾನಿಗಳು ಚಪ್ಪಾಳೆ ತಟ್ಟುವ ಮೂಲಕ ನಿರ್ಣಯಗಳಿಗೆ ಬೆಂಬಲ ವ್ಯಕ್ತಪಡಿಸಿದರು.

# ಬಸವಜಯಂತಿ ಹೊತ್ತಿಗೆ ಆಧುನಿಕ ಅನುಭವಮಂಟಪ ಪೂರ್ಣ:ಈಶ್ವರ ಖಂಡ್ರೆ

**ಕೆ.ಆರ್.ನಗರ, ಅ.28 :**
ಬಸವಕಲ್ಯಾಣದಲ್ಲಿ 750 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಆಧುನಿಕ ಅನುಭವ ಮಂಟಪ ಕಾಮಗಾರಿ ಬರುವ ಬಸವಜಯಂತಿಯ ವೇಳೆಗೆ ಪೂರ್ಣವಾಗಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.
ಕೆ.ಆರ್.ನಗರದಲ್ಲಿಂದು ವೀರಶೈವ ಲಿಂಗಾಯತ ಮಹಾಸಭಾ ಹಾಗೂ ಸಮಾಜದ ಸಂಘಟನೆಗಳ ಒಕ್ಕೂಟ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 770 ಅಮರಗಣಂಗಳ ಹೆಸರಿನಲ್ಲಿ 770 ಕಂಬಗಳ ಮೇಲೆ ಭವ್ಯ ಹಾಗೂ ದಿವ್ಯವಾದ ಅತ್ಯಾಧುನಿಕ ಅನುಭವ ಮಂಟಪವನ್ನು ನಿರ್ಮಿಸಲಾಗುತ್ತಿದ್ದು, ಬಹುತೇಕ ಶೇ.80ರಷ್ಟು ಕಾಮಗಾರಿ ಪೂರ್ಣಗೊಂಡಿದೆ ಎಂದು ತಿಳಿಸಿದರು.
ತಾವು 2016ರಲ್ಲಿ ಪೌರಾಡಳಿತ ಸಚಿವರಾಗಿದ್ದಾಗ ಅತ್ಯಾಧುನಿಕ ಅನುಭವ ಮಂಟಪ ನಿರ್ಮಾಣ ಮಾಡುವಂತೆ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ನಿಯೋಗದಲ್ಲಿ ತೆರಳಿ ಮನವಿ ಅರ್ಪಿಸಿದಾಗ, ಖ್ಯಾತ ಚಿಂತಕ ಡಾ.ಗೊ.ರು. ಚನ್ನಬಸಪ್ಪ ಅವರ ನೇತೃತ್ವದ ತಜ್ಞರ ಸಲಹಾ ಸಮಿತಿ ರಚಿಸಿ, ಬಜೆಟ್ ನಲ್ಲಿ ಘೋಷಣೆಯನ್ನೂ ಮಾಡಿದ್ದರು.
ನಂತರ ಯಡಿಯೂರಪ್ಪನವರು ಮುಖ್ಯಮಂತ್ರಿಗಳಾಗಿದ್ದಾಗ ಅನುಭವ ಮಂಟಪಕ್ಕೆ ಶಂಕುಸ್ಥಾಪನೆ ನೆರವೇರಿತ್ತು. ಬಸವ ಜಯಂತಿಯಂದೇ ಅಧಿಕಾರ ಸ್ವೀಕರಿಸಿದ್ದ ಸಿದ್ದರಾಮಯ್ಯನವರು ಬುದ್ಧ ಬಸವ ಅಂಬೇಡ್ಕರ್ ಅನುಯಾಯಿಗಳಾಗಿದ್ದು, ಮತ್ತೆ 2023ರಲ್ಲಿ ಮುಖ್ಯಮಂತ್ರಿಗಳಾದ ತರುವಾಯ 280 ಕೋಟಿ ರೂ. ಬಿಡುಗಡೆ ಮಾಡಿದ್ದು, ಕಾಮಗಾರಿ ಭರದಿಂದ ಸಾಗಿದೆ. ಇದಕ್ಕಾಗಿ ತಾವೆಲ್ಲರೂ ಅವರಿಗೆ ಆಭಾರಿಗಳಾಗಿದ್ದೇವೆ ಎಂದು ತಿಳಿಸಿದರು.
ಶರಣರ ಸಂಭಾಷಣೆಗೆ ರೊಬೋಟಿಕ್ ತಂತ್ರಜ್ಞಾನ ಬಳಕೆ:
ಜಗತ್ತಿಗೆ ಪ್ರಜಾಪ್ರಭುತ್ವ ಮತ್ತು ಸಂಸತ್ತಿನ ಪರಿಕಲ್ಪನೆಯನ್ನು ಕಟ್ಟಿಕೊಟ್ಟಿದ್ದೇ ಬಸವಕಲ್ಯಾಣದ ಅನುಭವ ಮಂಟಪ. 12ನೇ ಶತಮಾನದಲ್ಲಿ ಅನುಭವ ಮಂಟಪದಲ್ಲಿ ನಡೆಯುತ್ತಿದ್ದ ಶರಣರ ಚಿಂತನ ಮಂಥನವನ್ನು ಇಂದಿನ ಯುವಪೀಳಿಗೆಗೆ ದೃಶ್ಯಶ್ರವಣದ ಮೂಲಕ ತಲುಪಿಸುವ ಸಲುವಾಗಿ ರೊಬೋಟಿಕ್ ತಂತ್ರಜ್ಞಾನ ಬಳಸಲಾಗುತ್ತಿದೆ ಎಂದು ವಿವರಿಸಿದರು.
ಈ ತಂತ್ರಜ್ಞಾನದ ನೆರವಿನಿಂದ ಅಲ್ಲಮಪ್ರಭು, ಬಸವಣ್ಣ ಹಾಗೂ ಅಕ್ಕಮಹಾದೇವಿ ಸೇರಿದಂತೆ 20 ಶರಣರ ರೊಬೋಟ್ ಪುತ್ಥಳಿಗಳನ್ನು ನಿರ್ಮಿಸಲಾಗುತ್ತಿದ್ದು ಆ ರೊಬೋಟ್



ಪುತ್ಥಳಿ ಗಳು ಸಂಭಾಷಣೆಯನ್ನು ನಡೆಸುವ ಮೂಲಕ ಅಂದಿನ ಅನುಭವ ಮಂಟಪದ ಚಿತ್ರಣವನ್ನು ಸಾಕ್ಷಾತ್ಕರಿಸಲಿವೆ ಎಂದು ಈಶ್ವರ ಖಂಡ್ರೆ ವಿವರಿಸಿದರು.
ಇಷ್ಟಲಿಂಗಪೂಜೆಯ ವೈಜ್ಞಾನಿಕ ಅನುಭವಕ್ಕೂ ಅವಕಾಶ:
ಐಐಟಿ ಹೈದ್ರಾಬಾದ್ ಮತ್ತು ಐಐಟಿ ಖರಗ್ಪುರದ ನೆರವಿನಿಂದ ವೈದ್ಯಕೀಯ ಉಪಕರಣವೊಂದನ್ನು ವಿಶೇಷವಾಗಿ ರೂಪಿಸಲಾಗಿದ್ದು, ಅನುಭವ ಮಂಪಟಕ್ಕೆ ಬರುವ ಬಸವ ಭಕ್ತರಿಗೆ ಹಾಗೂ ಸಂದರ್ಶಕರಿಗೆ ವೈಜ್ಞಾನಿಕವಾಗಿ ಇಷ್ಟಲಿಂಗ ಪೂಜೆ ಮಾಡುವುದರಿಂದ ಮನಸ್ಸು, ಮೆದುಳು ಮತ್ತು ದೇಹದ ಮೇಲೆ ಆಗುವ ಪರಿಣಾಮದ ಸಾಕ್ಷಾತ್ ಅನುಭವ ಪಡೆಯುವ ಅವಕಾಶವನ್ನೂ ಕಲ್ಪಿಸಲಾಗಿದೆ.
ಇಲ್ಲಿ ಮೊದಲಿಗೆ ಸಂದರ್ಶಕರ ಹೃದಯ ಬಡಿತ, ನಾಡಿ ಮಿಡಿತ, ಮೆದುಳಿನ ರಕ್ತ ಸಂಚಾರ ಮೊದಲಾದ ಅಂಶಗಳನ್ನು ದಾಖಲಿಸಿ ನಂತರ ಅವರಿಗೆ ಇಷ್ಟ ಲಿಂಗ ಪೂಜೆ ಮಾಡಲು ಅವಕಾಶ ನೀಡಲಾಗುವುದು. ನಂತರ ನಾಡಿ ಮಿಡಿತ, ಹೃದಯ ಬಡಿತದ ಪರೀಕ್ಷೆ ಮಾಡಿ ಅವರಲ್ಲಾಗುವ ಶಾರೀರಿಕ ಬದಲಾವಣೆಯ ವಿವರವನ್ನು ತಿಳಿಸಲಾಗುವುದು. ಮನಸ್ಸನ್ನು ನಿರಾಳಗೊಳಿಸುವಲ್ಲಿ ಇಷ್ಟಲಿಂಗ ಪೂಜೆ ಎಷ್ಟು ಸಹಕಾರಿ ಎಂಬುದನ್ನು ಈ ವೈದ್ಯಕೀಯ ಉಪಕರಣ ಸಾಬೀತು ಪಡಿಸಲಿದೆ ಎಂದೂ ಈಶ್ವರ ಖಂಡ್ರೆ ತಿಳಿಸಿದರು.
ಆಧುನಿಕ ಅನುಭವ ಮಂಟಪ ಒಂದು ವೈಜ್ಞಾನಿಕ ಮತ್ತು ಆಧ್ಯಾತ್ಮಿಕ ಸಮ್ಮಿಲನದ ಕೇಂದ್ರವಾಗಿದ್ದು, ಯುವ ಪೀಳಿಗೆಗೆಯಲ್ಲಿ ಏಕಾಗ್ರತೆ, ಆತ್ಮಸ್ಥೈರ್ಯ ಹೆಚ್ಚಿಸಲಿದ್ದು, ಅನುಭವಮಂಟಪ ಲೋಕಾರ್ಪಣೆಯಾದ ಬಳಿಕ ದೇಶದ ಮಹತ್ವದ ಪ್ರವಾಸಿ ತಾಣಗಳಲ್ಲಿ ಒಂದಾಗಲಿದೆ ಎಂದೂ ತಿಳಿಸಿದರು.

# ೮೭ ಜನ ಕೆ.ಎ.ಎಸ್.ಅಧಿಕಾರಿಗಳ ವರ್ಗಾವಣೆ

**ಬೆಂಗಳೂರು ಅ.28 :**
ರಾಜ್ಯ ಸರಕಾರದ ಅಭಿವೃದ್ಧಿ ಕಾಮಗಾರಿಗಳ ಪರಿಣಾಮಕಾರಿ ಅನುಷ್ಠಾನ ಮತ್ತು ಆಡಳಿತಾತ್ಮಕ ದಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ 87 ಮಂದಿ ಕೆಎಎಸ್ ಅಧಿಕಾರಿಗಳನ್ನು ವರ್ಗಾವಣೆಗೊಳಿಸಿ ಅಧಿಕೃತ ಆದೇಶ ಹೊರಡಿಸಲಾಗಿದೆ.
ಈ ಬೃಹತ್ ವರ್ಗಾವಣೆ ಪ್ರಕ್ರಿಯೆಯಲ್ಲಿ ಪ್ರಮುಖವಾಗಿ ಜಿಲ್ಲಾ ಮತ್ತು ಉಪವಿಭಾಗ ಮಟ್ಟದ ಆಡಳಿತವನ್ನು ಬಲಪಡಿಸಲು ಆದ್ಯತೆ ನೀಡಲಾಗಿದೆ. ಅದರಂತೆ 9 ಅಧಿಕಾರಿಗಳನ್ನು ಉಪವಿಭಾಗಾಧಿಕಾರಿಗಳಾಗಿ (ಎಸಿ) ಹಾಗೂ 4 ಅಧಿಕಾರಿಗಳನ್ನು ಅಪರ ಜಿಲ್ಲಾಧಿಕಾರಿಗಳಾಗಿ (ಎಡಿಸಿ) ನಿಯೋಜಿಸಲಾಗಿದೆ.



ಅದೇ ರೀತಿ, ನಗರಾಭಿವೃದ್ಧಿ ಮತ್ತು ಗ್ರಾಮೀಣಾಭಿವೃದ್ಧಿ ವಲಯಕ್ಕೆ ಹೆಚ್ಚಿನ ಶಕ್ತಿ ತುಂಬಲು ಸರಕಾರ ನಿರ್ಧರಿಸಿದ್ದು, ನಗರಾಭಿವೃದ್ಧಿ ಇಲಾಖೆಗೆ (ಯುಡಿಡಿ) 15 ಅಧಿಕಾರಿಗಳನ್ನು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ (ಆರ್‌ಡಿಪಿಆರ್) 13 ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಉಳಿದ ಅಧಿಕಾರಿಗಳನ್ನು ರಾಜ್ಯದ ವಿವಿಧ ಪ್ರಮುಖ ಇಲಾಖೆಗಳು ಹಾಗೂ ಆಡಳಿತಾತ್ಮಕ ಹುದ್ದೆಗಳಿಗೆ ವರ್ಗಾಯಿಸಿ ಆದೇಶಿಸಲಾಗಿದೆ.

